ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.3541/2021**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಮಲ್ಲಯ್ಯ** | | |
| **ತಂದೆಃಹೆಸರು** | **ನಿರುಪಾದಿ** | **ಪಿಡಬ್ಲೂಃ** | **3** |
| **ವಯಸ್ಸುಃ** | **26 ವರ್ಷ** | **ಸಿಡಬ್ಲೂಃ** | **5** |
| **ಉದ್ಯೋಗಃ** | **ಚಾಲಕ** | | |
| **ವಾಸ ಸ್ಥಳಃ** | **ಮಲ್ಲಾಪುರ** | | |

**ದಿನಾಂಕ 08.01.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ನನಗೆ ಘಟನೆಯ ಬಗ್ಗೆ ಏನೂ ಗೊತ್ತಿಲ್ಲ, ನಾನು ಅಪಘಾತವನ್ನು ನೋಡಿಲ್ಲ, ಪೋಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ದಿನಾಂಕಃ25.02.2021 ರಂದು ನಾನು ಶ್ರೀಪುರಂ ಜಂಕ್ಷನ್‌ನಲ್ಲಿದ್ದಾಗ ಚಾಸಾ-1 ರವರ ತಮ್ಮನಾದ ಹನುಮಂತ ಈತನಿಗೆ ಲಾರಿ ಹಿಂದಿನಿಂದ ಅಪಘಾತ ಪಡಿಸಿ, ಆತನಿಗೆ ಭಾರಿ ಗಾಯವಾಗಿರುತ್ತದೆ, ಆತನನ್ನು ಅಂಬ್ಯುಲೆನ್ಸ್‌ನಲ್ಲಿ ಆಸ್ಪತ್ರೆಗೆ ಕಳಿಸಿಕೊಟ್ಟಿದ್ದು, ಅಪಘಾತವು ಲಾರಿ

ಸಂ.ಕೆ ಎ 04/ಡಿ-2971 ರ ಚಾಲಕ ಅಜಾಗರೂಕತೆಯಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ನರಸಿಂಹ & ರಾಮಾಂಜನೇಯ ರವರು ಸಹ ಸ್ಥಳದಲ್ಲಿದ್ದರು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ & ಮರುಗಳನ್ನು ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆ & ಮರು ಹೇಳಿಕೆಗಳನ್ನು ನಿಪಿ-10 & 11 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.